**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಟಿ.ನರಸೀಪುರ**

ದಿನಾಂಕ 10 ನೇ ಮಾರ್ಚ್ 2026

**ಸಿ.ಸಿ. 590/2026**

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ಭೈರವ ಬಿನ್ ಶಿವಯ್ಯ, 20 ವರ್ಷ,
ವಾಸಃ ಜೈ ಭೀಮ್ ನಗರ, ಬನ್ನೂರು ಟೌನ್,
ಟಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

**ಆರೋಪಣೆ**

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿಃ 15/02/2026 ರಂದು ರಾತ್ರಿ 9.30 ಗಂಟೆ ಸಮಯದಲ್ಲಿ ಬನ್ನೂರು ಠಾಣಾ ವ್ಯಾಪ್ತಿಯ ಟಿ.ನರಸೀಪುರ ತಾಲ್ಲೂಕು, ಬನ್ನೂರು ಟೌನ್ ಎಸ್.ಆರ್.ಪಿ ರಸ್ತೆಯಲ್ಲಿರುವ ರೇಣುಕಾ ಬಾರ್ ಹಿಂಭಾಗದ ಜಮೀನಿನ ಬಳಿ ಖಾಲಿ ಜಾಗದ ಸಾರ್ವಜನಿಕ ಸ್ಥಳದಲ್ಲಿ, ಆರೋಪಿಯಾದ ನೀವು ನಶೆ ಬರುವ ಗಾಂಜಾವನ್ನು ಸಿಗರೇಟ್ ನಲ್ಲಿ ಬೆರೆಸಿಕೊಂಡು ಸೇದುತ್ತಿದ್ದು, ನಿಮ್ಮನ್ನು ವಶಕ್ಕೆ ಪಡೆದು ಪರಿಶೀಲಿಸಲಾಗಿ ನೀವು ನಿಷೇದಿತ ಮಾದಕ ಸೇದಿರುವುದು ತಿಳಿದು ಬಂದಿದ್ದು, ಆ ಮೂಲಕ ನೀವು ಮಾದಕ ದ್ರವ್ಯಗಳು ಮತ್ತು ಮನೋವಿಶ್ಲೇಷಕ ವಸ್ತುಗಳು, ಕಾಯಿದೆ ಕಲಂ.27(ಬಿ) ರನ್ವಯ ಅಪರಾಧ ಮಾಡಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**<u>ಆರೋಪಿಯ ಹೇಳಿಕೆ</u>**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**<u>ಆರೋಪಿಯ ಸಹಿಃ</u>**